3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No.205/2018**

ಪ್ರಾಸಾ 8

ಚಾಸಾ 8

| | |
|---|---|
| ಹೆಸರು | ಪ್ರಭುಸ್ವಾಮಿ |
| ತಂದೆಯ ಹೆಸರು | ಚೆನ್ನಿಗರಾಯಪ್ಪ |
| ವಯಸ್ಸು | 64 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸಸ್ಥಳ | ಬಿಳಿಗೆರೆಪಾಳ್ಯ |

ಸಾಕ್ಷಿಯನ್ನು ದಿನಾಂಕ 11.06.2025 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ</u>**

1) ಈಗ ನನಗೆ ತೋರಿಸಿದ ನಿಪಿ.3 ರಲ್ಲಿ ನನ್ನ ಸಹಿ ಇರುತ್ತದೆ. ಅದನ್ನು ನಿಪಿ.3(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಏಳೆಂಟು ವರ್ಷಗಳ ಹಿಂದೆ ಮಧ್ಯಾಹ್ನ ಕೆ.ಬಿ.ಕ್ರಾಸ್ ಗೆ ಹೋಗುತ್ತಿದ್ದಾಗ ಪೋ.ಠಾಣೆಯಲ್ಲಿ 1 ನೇ ಆರೋಪಿ ಇದ್ದರು. ಆಗ ಪೊಲೀಸರು ನನ್ನನ್ನು ಕರೆದು ಸದರಿ ಸಹಿಯನ್ನು ಪಡೆದುಕೊಂಡಿರುತ್ತಾರೆ. ನನ್ನೊಂದಿಗೆ ಬೇರೆ ಯಾರೂ ಸಹಿಯನ್ನು ಮಾಡಿಲ್ಲ. ಯಾವ ವಿಚಾರಕ್ಕೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರು ಮಾಡಿದ ಪಂಚನಾಮೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸರ್ಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ

ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗಂಡು ಅನುಮತಿ ನೀಡಲಾಯಿತು)

**ಪಾಟೀಸವಾಲುಃ ಸರ್ಕಾರಿ ಅಭಿಯೋಜಕರವರಿಂದಃ**

2) ದಿನಾಂಕ 12.04.2018 ರಂದು ಬೆಳಿಗ್ಗೆ 10 ಗಂಟೆಗೆ ಚಾಸಾ.1 ರವರು ತೋರಿಸಿದ ಘಟನಾ ಸ್ಥಳವಾದ 1 ನೇ ಆರೋಪಿಯ ಮನೆಯಲ್ಲಿ ಈ ಪ್ರಕರಣದ ಎಲ್ಲಾ ಆರೋಪಿಗಳು ಸೇರಿ ತನಗೆ ಹಲ್ಲೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು ಪ್ರಾಣ ಬೆದರಿಕೆ ಹಾಕಿರುತ್ತಾರೆಂದು 2 ಮತ್ತು 3 ನೇ ಆರೋಪಿಗಳು ಚಾಕುವಿನಿಂದ ತನಗೆ ಕುತ್ತಿಗೆಗೆ , ಎಡ ಮತ್ತು ಬಲತೊಡೆಗೆ ಹಲ್ಲೆ ಮಾಡಿದ್ದು ಎಲ್ಲಾ ಆರೋಪಿಗಳು ಅವಾಚ್ಯ ಶಬ್ದಗಳಿಂದ ಬೈದು ಹಣ ಕೊಡುವಂತೆ ಒತ್ತಾಯಿಸಿ ಕೃತ್ಯ ನಡೆದ ಸ್ಥಳ ಇದೇ ಎಂದು ತೋರಿಸಿದ್ದು ಆ ಜಾಗದಲ್ಲಿ ಬೆಳಿಗ್ಗೆ 11 ಗಂಟೆಯವರೆಗೆ ಪಂಚನಾಮೆಯನ್ನು ಮಾಡಿಕೊಂಡು ನನ್ನ ಮತ್ತು ಚಾಸಾ.7 ರವರ ಸಹಿಗಳನ್ನು ಪಡೆದುಕೊಂಡಿರುತ್ತಾರೆಂದರೆ ಸರಿಯಲ್ಲ. ಎಲ್ಲಾ ಆರೋಪಿತರು ನನಗೆ ಪರಿಚಯ ಇರುತ್ತಾರೆ ಮತ್ತು ವಿಶ್ವಾಸದಿಂದ ಇರುತ್ತಾರೆ ಎಂದರೆ ಸರಿ. ಆದ್ದರಿಂದ, ಅವರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ 1 ರಿಂದ 6 ನೇ ಆರೋಪಿಗಳ ಪರ ಶ್ರೀ.ಎನ್.ಬಿ. ವಕೀಲರಿಂದ : .**

3) ನಾನು ಸಹಿ ಮಾಡಿದಾಗ ಗೌರಮ್ಮರವರು ಠಾಣೆಯಲ್ಲಿ ಇರಲಿಲ್ಲ ಎಂದರೆ ಸರಿ.

**ಪಾಟೀಸವಾಲುಃ 7 ನೇ ಆರೋಪಿ ಪರ ವಕೀಲರಿಂದ : ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ತುಮಕೂರು.